**ಸಾಕ್ಷಿಯನ್ನು ದಿಃ 17.11.2021 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಶ್ರೀ ವಿ.ಎಸ್.ವಿ. ವಕೀಲರಿಂದಃ**

ಈಗ ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣಪತ್ರದ ಮೂಲಕ ನ್ಯಾಯಾಲಯಕ್ಕೆ ಸಲ್ಲಿಸುತ್ತಿದ್ದೇನೆ. ಹಾಗೂ ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ನನಗೆ ತಿಳಿದಿರುತ್ತವೆ ಮತ್ತು ಸಂಗತಿಗಳು ಸತ್ಯವಾಗಿರುತ್ತವೆ ಮತ್ತು ನಾನು ಅದಕ್ಕೆ ನನ್ನ ಹೆಬ್ಬೆಟ್ಟಿನ ಗುರುತನ್ನು ಹಾಕಿರುತ್ತೇನೆ.

ನಾನು ಕೆಲವೊಂದು ದಾಖಲೆಗಳನ್ನು ಹಾಜರು ಪಡಿಸಿದ್ದು, ಅವುಗಳನ್ನು ನೋಡಿದರೆ ಗುರುತಿಸುತ್ತೇನೆ.

ಸಾಕ್ಷಿಯು ಸರ್ವೇ ನಂಬರ್ 43/2, 43/3 ಗಳ ಒಟ್ಟು 18 ಆರ್.ಟಿ.ಸಿ. ಗಳನ್ನು ನೋಡಿ ಗುರುತಿಸಿದ್ದು, ಅವುಗಳನ್ನು ನಿ ಪಿ 1 ರಿಂದ 18 ಎಂದು ಗುರುತಿಸಲಾಯಿತು. ಸರ್ವೇ ನಂಬರ್ 43/3 (ಎಂ.ಆರ್. ನಂಬರ್.ಹೆಚ್2/2011-12) ರ ಮುಟೇಷನ್ ರಿಜಿಸ್ಟರ್ ಎಕ್ಸ್ ಟ್ರ್ಯಾಕ್ಟ್ ಅನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಅದನ್ನು ನಿ ಪಿ 19 ಎಂದು ಗುರುತಿಸಲಾಯಿತು. ಸರ್ವೇ ನಂಬರ್ 43/2 (ಎಂ.ಆರ್. ನಂಬರ್.ಹೆಚ್5/2012-13) ರ ಮುಟೇಷನ್ ರಿಜಿಸ್ಟರ್ ಎಕ್ಸ್ ಟ್ರ್ಯಾಕ್ಟ್ ಅನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಅದನ್ನು ನಿ ಪಿ 20 ಎಂದು ಗುರುತಿಸಲಾಯಿತು. ವಂಶವೃಕ್ಷವನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಅದನ್ನು ನಿ ಪಿ 21 ಎಂದು ಗುರುತಿಸಲಾಯಿತು. ಚಿಕ್ಕತಿಮ್ಮರಾಯಪ್ಪ ರವರ ಮರಣ ಪ್ರಮಾಣ ಪತ್ರವನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಅದನ್ನು ನಿ ಪಿ 22 ಎಂದು ಗುರುತಿಸಲಾಯಿತು. ರಶೀದಿ ಪಟ್ಟಾ ಪುಸ್ತಕವನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಅದನ್ನು ನಿ ಪಿ 23 ಎಂದು ಗುರುತಿಸಲಾಯಿತು.

**ಆದ್ದರಿಂದ ದಾವೆಯಲ್ಲಿ ಕೋರಿದಂತೆ ಡಿಕ್ರಿ ಮಾಡಲು ವಿನಂತಿ.**

**<u>ಪಾಟೀ ಸವಾಲುಃ 2 ನೇ ಪ್ರತಿವಾದಿ ಪರವಾಗಿ ಶ್ರೀ ಎನ್.ಎನ್. ವಕೀಲರಿಂದಃ</u>**

ಪಾಟೀ ಸವಾಲಿಗಾಗಿ ವಕೀಲರು ಕಾಲಾವಕಾಶ ಕೋರಿದ್ದು, ಅದರಂತೆ ಕಾಲಾವಕಾಶ ನೀಡಿ ಮುಂದೂಡಲಾಯಿತು.

**<u>ಪಾಟೀ ಸವಾಲುಃ 3 ರಿಂದ 6 ನೇ ಪ್ರತಿವಾದಿ ಪರವಾಗಿ ಶ್ರೀ ಜೆ.ಪಿ. ವಕೀಲರಿಂದಃ</u>**

ಪಾಟೀ ಸವಾಲಿಗಾಗಿ ವಕೀಲರು ಕಾಲಾವಕಾಶ ಕೋರಿದ್ದು, ಅದರಂತೆ ಕಾಲಾವಕಾಶ ನೀಡಿ ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕೃತ ಮಾಡಲಾಗಿದೆ.)

ಓ ಹೇ ಕೇ ಸರಿ ಇದೆ.

**(ಅಜಿತ್ ದೇವರಮನಿ)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ,**
**ಬಂಗಾರಪೇಟೆ**